# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 626 |
| ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳಿಗೆ ರಾಜ್ಯ ಸರ್ಕಾರ ಕಳೆದ 5 ವರ್ಷಗಳಿಂದ ಚುನಾವಣೆಯನ್ನು ನಡೆಸದೆ ಇರುವುದು ನಿಜವೇ; ಹಾಗಿದ್ದಲ್ಲಿ, ಈ ಚುನಾವಣೆಗಳನ್ನು ನಡೆಸದೆ ಇರಲು ಸರ್ಕಾರಕ್ಕೆ ಇರುವ ಕಾರಣಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿಯು ಜೂನ್ 2021ಕ್ಕೆ ಮುಕ್ತಾಯಗೊಂಡಿರುತ್ತದೆ.<br><br>ಕೋವಿಡ್ ಕಾರಣ ತಕ್ಷಣದಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಿರುವುದಿಲ್ಲ. ನಂತರದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿ ತರಲಾಗಿದೆ.<br><br>ಅದರ ಪ್ರಕಾರ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿ ನಿರ್ಣಯವನ್ನು ಅಂತಿಮಗೊಳಿಸಲಾಗಿದೆ.<br><br>ಮೀಸಲಾತಿ ನಿಗದಿಪಡಿಸಲು ಬಾಕಿ ಇರುತ್ತದೆ. |
| (ಆ) | ರಾಜ್ಯದಲ್ಲಿ ಜಿಲ್ಲಾ ತಾಲ್ಲೂಕು ಪಂಚಾಯತ್‌ಗಳ ಚುನಾವಣೆಗೆ ಪೂರ್ವಭಾವಿ ಸಿದ್ಧತೆಗೆ ಅಗತ್ಯವಿರುವ ಕೇತ್ರ ಪುನರ್ ವಿಂಗಡಣೆ ಮತ್ತು ಮೀಸಲಾತಿ ನಿಗಧಿ ಮಾಡಲಾಗಿದೆಯೇ; ಇಲ್ಲದಿದ್ದಲ್ಲಿ, ಈ ಸಮಸ್ಯೆಗೆ ಕಾರಣಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ಕ್ಷೇತ್ರ ಪುನರ್ ವಿಂಗಡಣೆಯನ್ನು ಮಾಡಿ ಸರ್ಕಾರವು ರಾಜ್ಯದ 30 ಜಿಲ್ಲೆಗಳ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ದಿನಾಂಕ: 16-12-2023ರಂದು ಅಧಿಸೂಚಿಸಿದೆ ಮತ್ತು ಕೊಡಗು ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ದಿನಾಂಕ: 07-08-2024ರಂದು ಅಧಿಸೂಚಿಸಿದೆ.<br><br>ಮೀಸಲಾತಿ ನಿಗದಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ. |
| (ಇ) | ರಾಜ್ಯ ಸರ್ಕಾರ ಭಾರತದ ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಹಿಂದುಳಿದ ವರ್ಗಗಳಿಗೆ ಶೇಕಡ 27ರಷ್ಟು ಮೀಸಲಾತಿ ನೀಡಬೇಕೆಂದು ಆದೇಶದ ಪಾಲನೆ ಮಾಡಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 5(2), ಪ್ರಕರಣ 123 (2) ರಲ್ಲಿ ಮತ್ತು ಪ್ರಕರಣ 162(2)ರಂತೆ ಕ್ರಮವಾಗಿ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿಗಳ ಸ್ಥಾನಗಳಲ್ಲಿ ಹಿಂದುಳಿದ ವರ್ಗಗಳಿಗೆ ಮೀಸಲಾತಿಯನ್ನು ಕಲ್ಪಿಸಲಾಗುತ್ತಿದೆ. |

| | | |
|---|---|---|
| (ಈ) | ರಾಜ್ಯ ಸರ್ಕಾರ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳ ಚುನಾವಣೆ ನಡೆಸಲು ವಿಳಂಬ ಮಾಡಿದ ಕಾರಣ ರಾಜ್ಯ ಉಚ್ಛ ನ್ಯಾಯಾಲಯ ರಾಜ್ಯ ಸರ್ಕಾರಕ್ಕೆ ರೂ 5 ಲಕ್ಷ ದಂಡ ವಿಧಿಸಿರುವುದು ನಿಜವೇ; ಹಾಗಿದ್ದಲ್ಲಿ, ಸರ್ಕಾರ ಈ ದಂಡವನ್ನು ಪಾವತಿ ಮಾಡಿದೆಯೇ; (ಪೂರ್ಣ ಮಾಹಿತಿ ನೀಡುವುದು) | ಹೌದು<br><br>ಸರ್ಕಾರವು, ಮಾನ್ಯ ಉಚ್ಛನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:20426/2021ರ ಪ್ರಕರಣದಲ್ಲಿ ದಿನಾಂಕ: 14-12-2022 ರಂದು ನೀಡಿದ ಆದೇಶದ ಪ್ರಕಾರ ದಂಡ ಪಾವತಿಸಿದೆ. |
| (ಉ) | ರಾಜ್ಯ ಸರ್ಕಾರ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳ ಚುನಾವಣೆಗಳನ್ನು ಯಾವ ದಿನಾಂಕದಲ್ಲಿ ನಡೆಸುವುದಾಗಿ ಹೈಕೋರ್ಟ್‌ನಲ್ಲಿ ಮುಚ್ಚಳಿಕೆ ಬರೆದು ಕೊಟ್ಟಿದೆ? (ಪೂರ್ಣ ಮಾಹಿತಿ ನೀಡುವುದು) | ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳಿಗೆ ಮೀಸಲಾತಿ ನಿಗದಿ ಪ್ರಕ್ರಿಯೆ ಪೂರ್ಣಗೊಂಡ ನಂತರ ಶೀಘ್ರದಲ್ಲಿ ಚುನಾವಣೆ ನಡೆಸಲಾಗುವುದು. |

ಸಂಖ್ಯೆ: ಗ್ರಾಅಪ 664 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.